# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತ ಐದನೆಯ ಅಧಿವೇಶನ

### ಸಂತಾಪ ಸೂಚನೆಗಳು

**ಮಾನ್ಯ ಸಭಾಪತಿಯವರು:**

ವಿಧಾನ ಪರಿಷತ್ತಿನ ಮಾಜಿ ಶಾಸಕರಾದ ಪಟೇಲ್ ಶಿವರಾಂ, ಭಾರತದ ಮಾಜಿ ಪ್ರಧಾನ ಮಂತ್ರಿಗಳಾದ ಮನಮೋಹನ ಸಿಂಗ್, ಹಿರಿಯ ಸಾಹಿತಿ ನಾ.ಡಿಸೋಜ, ಸಂಗೀತ ನಿರ್ದೇಶಕರಾದ ಎಸ್.ಸೋಮಸುಂದರಂ, ಚಲನಚಿತ್ರ ನಟ ಆರ್.ವಿಜಯಕುಮಾರ್ (ಸರಿಗಮ ವಿಜಿ) ಹಾಗೂ ಜಾನಪದ ಹಾಡುಗಾರ್ತಿ ಸುಕ್ರಿ ಬೊಮ್ಮಗೌಡ ಅವರುಗಳು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.

## 1. ಪಟೇಲ್ ಶಿವರಾಂ

**ವಿಧಾನ ಪರಿಷತ್ತಿನ ಮಾಜಿ ಸದಸ್ಯರಾಗಿದ್ದ ಪಟೇಲ್ ಶಿವರಾಂ ಅವರು ದಿನಾಂಕ:16.01.2025ರಂದು ನಿಧನ ಹೊಂದಿರುತ್ತಾರೆ.**

1950ರ ಏಪ್ರಿಲ್ 10ರಂದು ಹಾಸನ ಜಿಲ್ಲೆಯ ದೊಡ್ಡಗೇಣಿಗೆರೆ ಗ್ರಾಮದಲ್ಲಿ ಜನಿಸಿದ್ದ ಶ್ರೀಯುತರು ವೃತ್ತಿಯಲ್ಲಿ ಕೃಷಿಕರಾಗಿದ್ದರು. 2010 ರಿಂದ 2016ರ ಅವಧಿಯಲ್ಲಿ ಹಾಸನ ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ಚುನಾಯಿತರಾಗಿ ಸೇವೆಯನ್ನು ಸಲ್ಲಿಸಿದ್ದರು. ಶ್ರೀಯುತರು 1978-83ರ ಅವಧಿಗೆ ದೊಡ್ಡಗೇಣಿಗೇರೆ ಗ್ರಾಮ ಪಂಚಾಯತ್ ಅಧ್ಯಕ್ಷರಾಗಿ, 1984ರಲ್ಲಿ ಹಾಸನ ಜಿಲ್ಲಾ ಪಂಚಾಯತ್‌ನ ಅಧ್ಯಕ್ಷರಾಗಿ, ಹಾಸನ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ನ ಅಧ್ಯಕ್ಷರಾಗಿ, ಹಾಸನ ಜಿಲ್ಲೆಯ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ, ನವದೆಹಲಿಯ ಕ್ರಿಭ್ಕೋ ಸದಸ್ಯರಾಗಿ ಹಾಗೂ ಅಪೆಕ್ಸ್ ಬ್ಯಾಂಕ್ ನಿರ್ದೇಶಕರಾಗಿ ಮತ್ತು ಡಿ.ಸಿ.ಸಿ.ಬ್ಯಾಂಕ್ ಹಾಸನ ಇದರ ಅಧ್ಯಕ್ಷರಾಗಿ ಸೇವೆಯನ್ನು ಸಲ್ಲಿಸಿದ್ದರು. ಸಹಕಾರಿ ಚಳುವಳಿಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದ ಶ್ರೀಯುತರು ರಾಜ್ಯ ಮಟ್ಟದ ಸಹಕಾರ ರತ್ನ ಪ್ರಶಸ್ತಿಗೆ ಭಾಜನರಾಗಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಒಬ್ಬ ಹಿರಿಯ ರಾಜಕಾರಣಿ ಹಾಗೂ ಸಹಕಾರ ಕ್ಷೇತ್ರದ ಹಿರಿಯ ದುರೀಣರೊಬ್ಬರನ್ನು ಕಳೆದುಕೊಂಡಂತಾಗಿದೆ.**

## 2. ಡಾ: ಮನಮೋಹನ್ ಸಿಂಗ್

**ಭಾರತದ ಮಾಜಿ ಪ್ರಧಾನಿ, ರಾಷ್ಟ್ರದ ಅರ್ಥಕ್ರಾಂತಿಯ ಹರಿಕಾರ ಹಾಗೂ ಶಿಕ್ಷಣ ತಜ್ಞರಾಗಿದ್ದ ಡಾ: ಮನಮೋಹನ್ ಸಿಂಗ್ ಅವರು ದಿನಾಂಕ: 26.12.2024ರಂದು ನಿಧನ ಹೊಂದಿರುತ್ತಾರೆ.**

1932ರ ಸೆಪ್ಟೆಂಬರ್ 26ರಂದು ಅವಿಭಜಿತ ಭಾರತದ ಪಂಜಾಬ್‌ನ ಗಾಹ್‌ನಲ್ಲಿ ಜನಿಸಿದ್ದ ಶ್ರೀಯುತರು ಅರ್ಥಶಾಸ್ತ್ರದಲ್ಲಿ ಪಿಎಚ್‌ಡಿ ಪದವೀಧರರಾಗಿದ್ದು, ಕೇಂಬ್ರಿಡ್ಜ್ ವಿಶ್ವವಿದ್ಯಾಲಯದಿಂದ ಅರ್ಥಶಾಸ್ತ್ರದಲ್ಲಿ ಆನರ್ಸ್ ಪದವಿ ಹಾಗೂ ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದಿಂದ ಡಿ.ಫಿಲ್ ಗೌರವ ಪಡೆದಿದ್ದ ಶ್ರೀಯುತರು ಪಂಜಾಬ್ ಹಾಗೂ ದೆಹಲಿ ವಿಶ್ವವಿದ್ಯಾಲಯದಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ್ದರು.

ಶ್ರೀಯುತರು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕೆ ಮಂತ್ರಾಲಯದಲ್ಲಿ ಸಲಹೆಗಾರರಾಗಿ ತಮ್ಮ ವೃತ್ತಿಯನ್ನು ಆರಂಭಿಸಿ ಭಾರತ ಸರ್ಕಾರದ ಹಣಕಾಸು ಸಚಿವಾಲಯದ ಮುಖ್ಯ ಆರ್ಥಿಕ ಸಲಹೆಗಾರರು ಹಾಗೂ ಹಣಕಾಸು ಸಚಿವಾಲಯದ ಕಾರ್ಯದರ್ಶಿಯಾಗಿ, ಭಾರತೀಯ ರಿಸರ್ವ್ ಬ್ಯಾಂಕ್ ನಿರ್ದೇಶಕರು ಮತ್ತು ಗೌವರ್ನರ್ ಆಗಿ, ಯೋಜನಾ ಆಯೋಗದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿರುತ್ತಾರೆ.

ಶ್ರೀಯುತರು 1991ರಿಂದ 2019ರವರೆಗೆ ಅಸ್ಸಾಂ ರಾಜ್ಯದಿಂದ ಹಾಗೂ 2019ರಿಂದ 2024ರವರೆಗೆ ರಾಜಸ್ಥಾನ ರಾಜ್ಯದಿಂದ ರಾಜ್ಯಸಭೆಯ ಸದಸ್ಯರಾಗಿ ಸತತವಾಗಿ 33 ವರ್ಷಗಳು ಸಂಸದರಾಗಿ ಸೇವೆ ಸಲ್ಲಿಸಿರುತ್ತಾರೆ. 1991ರಿಂದ 1996ರವರೆಗೆ ಕೇಂದ್ರ ವಿತ್ತೀಯ ಸಚಿವರಾಗಿ, 1998ರಿಂದ 2004ರವರೆಗೆ ರಾಜ್ಯಸಭೆಯ ವಿರೋಧ ಪಕ್ಷದ ನಾಯಕರಾಗಿ ಕಾರ್ಯನಿರ್ವಹಿಸಿದ್ದ ಶ್ರೀಯುತರು 2004ರಿಂದ 2014ರವರೆಗೆ ಎರಡು ಬಾರಿ ಭಾರತದ ಪ್ರಧಾನಿಯಾಗಿ ಆಡಳಿತ ನಡೆಸಿದ್ದರು. ಶ್ರೀಯುತರ ಆಡಳಿತಾವಧಿಯಲ್ಲಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಮಿಷನ್, ವಿಶಿಷ್ಟ ಗುರುತಿನ ಪ್ರಾಧಿಕಾರ, ಗ್ರಾಮೀಣ ಉದ್ಯೋಗ ಖಾತ್ರಿ (ನರೇಗಾ) ಯೋಜನೆ ಮತ್ತು ಮಾಹಿತಿ ಹಕ್ಕು ಕಾಯ್ದೆ ಹಾಗೂ ಶಿಕ್ಷಣದ ಹಕ್ಕು ಸೇರಿದಂತೆ ಹಲವಾರು ಪ್ರಮುಖ ಶಾಸನಗಳು ಮತ್ತು ಯೋಜನೆಗಳನ್ನು ಜಾರಿಗೆ ತಂದಿದ್ದರು.

ಶ್ರೀಯುತರು 1991ರಲ್ಲಿ ಹಣಕಾಸು ಸಚಿವರಾಗಿ ನೇಮಕಗೊಂಡಾಗ ದೇಶವು ಆರ್ಥಿಕ ಕುಸಿತದ ಅಂಚಿನಲ್ಲಿದ್ದು, ರೂಪಾಯಿ ಮೌಲ್ಯವನ್ನು ವೃದ್ಧಿಸಿ, ತೆರಿಗೆಗಳನ್ನು ಕಡಿಮೆ ಮಾಡಿಸುವುದರ ಜೊತೆಗೆ ಸರ್ಕಾರಿ ಚಾಲಿತ ಕೈಗಾರಿಕೆಗಳನ್ನು ಖಾಸಗೀಕರಣಗೊಳಿಸಿ ವಿದೇಶಿ ಹೂಡಿಕೆಯನ್ನು ಪ್ರೋತ್ಸಾಹಿಸಿ, ಆರ್ಥಿಕ ಉತ್ಕರ್ಷಕ್ಕೆ ಮಹತ್ವದ ಸುಧಾರಣೆಗಳನ್ನು ತಂದು, 2009ರಲ್ಲಿ ಭಾರತವು ಬ್ರಿಕ್ಸ್‌ನ ಸ್ಥಾಪಕ ಸದಸ್ಯ ರಾಷ್ಟ್ರವಾಗಿ ಭಾರತದ ಆರ್ಥಿಕತೆಯು ಸದೃಢ ಮಟ್ಟಕ್ಕೆ ಬೆಳೆಯಲು ಮಹತ್ವದ ಪಾತ್ರವಹಿಸಿದ್ದರು.

ಶ್ರೀಯುತರು ಸರ್ವಶಿಕ್ಷ ಅಭಿಯಾನ ಕಾರ್ಯಕ್ರಮವನ್ನು ಜಾರಿಗೊಳಿಸುವುದರ ಜೊತೆಗೆ ಎಐಐಎಮ್‌ಎಸ್, ಐಐಟಿ, ಐಐಎಮ್ ಹಾಗೂ ಇನ್ನಿತರೆ ವಿದ್ಯಾ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗದವರಿಗೆ ಶೇ.27ರಷ್ಟು ಸೀಟ್‌ಗಳನ್ನು ಕಾಯ್ದಿರಿಸುವ ಕಾನೂನನ್ನು ಜಾರಿಗೊಳಿಸಿದ ಕೀರ್ತಿಗೆ ಭಾಜನರಾಗಿರುತ್ತಾರೆ.

ಶ್ರೀಯುತರು 1991ರಿಂದ ಹಲವಾರು ಅಂತರರಾಷ್ಟ್ರೀಯ ಸಮಾವೇಶ ಮತ್ತು ಸಂಘಟನೆಗಳಲ್ಲಿ ಭಾರತವನ್ನು ಪ್ರತಿನಿಧಿಸಿ, 1993ರಲ್ಲಿ ಸೈಪ್ರಸ್‌ನಲ್ಲಿ ನಡೆದ ಕಾಮನ್‌ವೆಲ್ತ್ ಸರ್ಕಾರದ ಮುಖ್ಯಸ್ಥರ ಸಭೆ ಹಾಗೂ ವಿಯನ್ನಾದಲ್ಲಿ ನಡೆದ ವಿಶ್ವಮಾನವ ಹಕ್ಕುಗಳ ಸಮಾವೇಶದಲ್ಲಿ ಪಾಲ್ಗೊಂಡ ಭಾರತೀಯ ನಿಯೋಗದ ನೇತೃತ್ವವನ್ನು ವಹಿಸಿದ್ದರು.

ಶ್ರೀಯುತರು ಸಾಮಾಜಿಕ ಕ್ಷೇತ್ರದ ತಮ್ಮ ಅದ್ವಿತೀಯ ಸಾಧನೆಗಾಗಿ ಪದ್ಮ ವಿಭೂಷಣ, ವಿಜ್ಞಾನ ಕಾಂಗ್ರೆಸ್‌ನ ಜವಾಹರ್‌ಲಾಲ್ ನೆಹರೂ ಜನ್ಮಶತಮಾನೋತ್ಸವ ಪ್ರಶಸ್ತಿ, ಹಣಕಾಸು ಸಚಿವರಿಗೆ ನೀಡುವ ಏಷ್ಯಾ ವಿತ್ತ ಪ್ರಶಸ್ತಿ ಹಾಗೂ ಯೂರೋ ಹಣ ಪ್ರಶಸ್ತಿ ಸೇರಿದಂತೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

**ಶ್ರೀಯುತರ ನಿಧನದಿಂದಾಗಿ ದೇಶವು ಒಬ್ಬ ಹಿರಿಯ ರಾಜಕಾರಣಿ ಹಾಗೂ ದೇಶದ ಸರ್ವಾಂಗೀಣ ಏಳಿಗೆಗಾಗಿ ಆರ್ಥಿಕ ನೀತಿಗಳನ್ನು ರೂಪಿಸಿದ್ದ ಶ್ರೇಷ್ಠ ಆರ್ಥಿಕ ಸುಧಾರಣೆಯ ಹರಿಕಾರರನ್ನು ಕಳೆದುಕೊಂಡಂತಾಗಿದೆ.**

## 3. ನಾ. ಡಿ'ಸೋಜಾ

**ಖ್ಯಾತ ಹಿರಿಯ ಸಾಹಿತಿ ನಾಬರ್ಟ್ ಡಿ'ಸೋಜಾ ಅವರು ದಿನಾಂಕ:05.01.2025ರಂದು ನಿಧನ ಹೊಂದಿರುತ್ತಾರೆ.**

1937ರ ಜೂನ್ 6ರಂದು ಶಿವಮೊಗ್ಗ ಜಿಲ್ಲೆಯ ಸಾಗರದಲ್ಲಿ ಜನಿಸಿದ್ದ ಶ್ರೀಯುತರು ಶಿವಮೊಗ್ಗದ ಸಹ್ಯಾದ್ರಿ ಕಾಲೇಜಿನಲ್ಲಿ ಇಂಟರ್‌ಮೀಡಿಯೆಟ್ ಶಿಕ್ಷಣ ಪಡೆದು, ಲೋಕೋಪಯೋಗಿ ಇಲಾಖೆಯಲ್ಲಿ ವೃತ್ತಿ ಜೀವನ ಆರಂಭಿಸಿ ಶರಾವತಿ ಯೋಜನೆ, ಕಾರ್ಗಲ್, ಮಾಸ್ತಿಕಟ್ಟೆ, ತೀರ್ಥಹಳ್ಳಿ, ಸಾಗರಗಳಲ್ಲಿ 37 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದರು. ಶ್ರೀಯುತರು 75 ಕಾದಂಬರಿಗಳು, 06 ಚಾರಿತ್ರಿಕ ಕಾದಂಬರಿ, ಮಕ್ಕಳಿಗಾಗಿ 25 ಕಾದಂಬರಿ, 09 ಕಥಾ ಸಂಕಲನ, ಸಮಗ್ರ ಕಥೆಗಳ ಎರಡು ಸಂಪುಟಗಳು, ಸುಮಾರು 500ಕ್ಕೂ ಹೆಚ್ಚು ಕಥೆಗಳು, ಹತ್ತಾರು ನಾಟಕಗಳು, ರೇಡಿಯೋ ನಾಟಕಗಳು, ಅನೇಕಾ ಪತ್ರಿಕಾ ಲೇಖನಗಳು ಹೀಗೆ ವಿಶಾಲ ವ್ಯಾಪ್ತಿಯ ಬರಹಗಳನ್ನು ನಾಡಿಗೆ ನೀಡುವ ಮೂಲಕ ಕನ್ನಡ ಸಾರಸ್ವತ ಲೋಕವನ್ನು ಶ್ರೀಮಂತಗೊಳಿಸಿದ್ದಾರೆ. ಇವರ "ಮುಳುಗಡೆಯ ಊರಿಗೆ ಬಂದವರು" ಎಂಬ ಮಕ್ಕಳ ಕಾದಂಬರಿಗೆ ಕೇಂದ್ರ ಸಾಹಿತ್ಯ ಅಕಾಡೆಮಿಯ "ಬಾಲ ಸಾಹಿತ್ಯ ಪುರಸ್ಕಾರ" "ದ್ವೀಪ" ಮತ್ತು "ಕಾಡಿನ ಬೆಂಕಿ" ಕಾದಂಬರಿಗಳು ಚಲನಚಿತ್ರಗಳಾಗಿ ರಾಷ್ಟ್ರೀಯ ಪ್ರಶಸ್ತಿಯನ್ನು ಪಡೆದಿವೆ. ಶ್ರೀಯುತರು ಮಡಿಕೇರಿಯಲ್ಲಿ ನಡೆದ 80ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದರು.

ಶ್ರೀಯುತರ ಸಣ್ಣ ಕಥೆಗಳು ಕೊಂಕಣಿ, ಮಲಯಾಳಂ, ತೆಲುಗು, ಹಿಂದಿ, ಇಂಗ್ಲೀಷ್ ಭಾಷೆಗಳಿಗೆ ಅನುವಾದಗೊಂಡಿರುತ್ತವೆ. ಶ್ರೀಯುತರ "ಮುಳುಗಡೆ", "ಕೊಳಗ", ಒಳಿತನ್ನು ಮಾಡಲು ಬಂದವರು", "ಬಣ್ಣ", "ಪಾದರಿಯಾಗುವ ಹುಡುಗ", "ಇಬ್ಬರು ಮಾಜಿಗಳು" ಮುಂತಾದ ಕಾದಂಬರಿಗಳು ವಿವಿಧ ವಿಶ್ವವಿದ್ಯಾಲಯಗಳಲ್ಲಿ ಪಠ್ಯಗಳಾಗಿವೆ. ಶ್ರೀಯುತರು ಸಾಹಿತ್ಯ ಲೋಕಕ್ಕೆ ನೀಡಿರುವ ಕೊಡುಗೆಗೆ ಕುವೆಂಪು ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್, ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಆಳ್ವಾಸ್ ನುಡಿಸಿರಿ ಹೀಗೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಕನ್ನಡ ಸಾರಸ್ವತ ಲೋಕದ ಹಿರಿಯ ಸಾಹಿತಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

## 4. ಎಸ್.ಸೋಮಸುಂದರಂ

**ಖ್ಯಾತ ಸುಗಮ ಸಂಗೀತ ಗಾಯಕ, ಪ್ರದರ್ಶಕ ಮತ್ತು ಸಂಯೋಜಕರಾದ ಎಸ್. ಸೋಮಸುಂದರಂ ಅವರು ದಿನಾಂಕ:12.01.2025ರಂದು ನಿಧನ ಹೊಂದಿರುತ್ತಾರೆ.**

ಶ್ರೀಯುತರು ವಿದ್ಯಾರ್ಥಿಯಾಗಿದ್ದಾಗಲೇ ಭಾವಗೀತೆಗಳನ್ನು ಹಾಡಲು ಪ್ರಾರಂಭಿಸಿ, ಕ್ರಮೇಣ ಆಕಾಶವಾಣಿಯಲ್ಲಿ ಸುಗಮ ಸಂಗೀತ ಮತ್ತು ಭಾವಗೀತೆಗಳನ್ನು ಹಾಡಿ, ರಾಜ್ಯ ಮತ್ತು ಹೊರ ರಾಜ್ಯಗಳಲ್ಲಿ 1000ಕ್ಕೂ ಹೆಚ್ಚು ಕಾರ್ಯಕ್ರಮಗಳನ್ನು ನೀಡಿದ್ದ ಇವರು ಹದಿನೈದು ಸಾವಿರಕ್ಕೂ ಹೆಚ್ಚು ಹಾಡುಗಳನ್ನು ಹತ್ತು ಹಲವು ಭಾಷೆಗಳಲ್ಲಿ ಹಾಡಿದ ಕೀರ್ತಿಗೆ ಭಾಜನರಾಗಿದ್ದಾರೆ. 1957ರಲ್ಲಿ ಬೆಂಗಳೂರಿನಲ್ಲಿ "ಗಾನಸುಧಾ ಸುಗಮ ಸಂಗೀತ ಅಕಾಡೆಮಿ" ಅನ್ನು ಪ್ರಾರಂಭಿಸುವ ಮೂಲಕ ಸುಗಮ ಸಂಗೀತ ಲೋಕಕ್ಕೆ ಅಪಾರವಾದ ಕೊಡುಗೆಯನ್ನು ನೀಡಿದ್ದರು.

ಶ್ರೀಯುತರು ಅತ್ಯುತ್ತಮ ಗಾಯನಕ್ಕಾಗಿ ರಾಷ್ಟ್ರ ಪ್ರಶಸ್ತಿ, ಐದು ಬಾರಿ ಕೇರಳ ಹಾಗೂ ನಾಲ್ಕು ಬಾರಿ ತಮಿಳುನಾಡು ರಾಜ್ಯಪ್ರಶಸ್ತಿ, ಸಂತ ಶಿಶುನಾಳ ಶರೀಫ್, ಕರ್ನಾಟಕ ಕಲಾಶ್ರೀ ಹಾಗೂ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗಳಲ್ಲದೆ ಇತರೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಒಬ್ಬ ಖ್ಯಾತ ಸುಗಮ ಸಂಗೀತ ಗಾಯಕ, ಪ್ರದರ್ಶಕ ಮತ್ತು ಸಂಯೋಜಕರನ್ನು ಕಳೆದುಕೊಂಡಂತಾಗಿದೆ.**

## 5. ಆರ್. ವಿಜಯಕುಮಾರ್

**ಸರಿಗಮ ವಿಜಿ ಎಂದು ಹೆಸರುವಾಸಿಯಾಗಿದ್ದ ರಂಗಭೂಮಿ ಹಾಗೂ ಸಿನಿಮಾರಂಗದ ನಟ, ಬರಹಗಾರ ಮತ್ತು ನಿರ್ದೇಶಕರಾದ ಆರ್. ವಿಜಯಕುಮಾರ್ ಅವರು ದಿನಾಂಕ:15.01.2025ರಂದು ನಿಧನ ಹೊಂದಿರುತ್ತಾರೆ.**

1949ರಲ್ಲಿ ಬೆಂಗಳೂರಿನ ವಿಮಾನಪುರದಲ್ಲಿ(ಎಚ್‌ಎಎಲ್ ಪ್ರದೇಶ) ಜನಿಸಿದ್ದ ಶ್ರೀಯುತರು ಸರ್ಕಾರಿ ಸ್ವಾಮ್ಯದ ಎನ್‌ಜಿಇಎಫ್ ಸಂಸ್ಥೆಯ ಉದ್ಯೋಗಿಯಾಗಿದ್ದರು. ರಂಗಭೂಮಿ ಕಲಾವಿದರಾಗಿದ್ದ ಶ್ರೀಯುತರು ಸಿನಿಮಾಗೆ ಪಾದರ್ಪಣೆ ಮಾಡಿ, ಸಹಾಯಕ ನಿರ್ದೇಶಕರಾಗಿ 80ಕ್ಕೂ ಅಧಿಕ ಚಿತ್ರಗಳಲ್ಲಿ ಕಾರ್ಯನಿರ್ವಹಿಸಿದ್ದಾರೆ. 1980ರಲ್ಲಿ ಗೀತಪ್ರಿಯಾ ನಿರ್ದೇಶನದ "ಬೆಳವಲದ ಮಡಿಲಲ್ಲಿ" ಚಿತ್ರದಲ್ಲಿ ಸಣ್ಣ ಪಾತ್ರ ಅಭಿನಯಿಸುವುದರ ಮೂಲಕ ಸಿನಿಮಾ ರಂಗದಲ್ಲಿ ನಟನಾಗಿ

ಗುರುತಿಸಿಕೊಂಡಿದ್ದ ಇವರು 300ಕ್ಕೂ ಅಧಿಕ ಸಿನಿಮಾಗಳಲ್ಲಿ ಪೋಷಕ ಮತ್ತು ಹಾಸ್ಯ ಪಾತ್ರಗಳಲ್ಲಿ ನಟಿಸಿದ್ದಾರೆ. ಶ್ರೀಯುತರ **"ಸಂಸಾರದಲ್ಲಿ ಸರಿಗಮ"** ಹಾಸ್ಯ ನಾಟಕವು 1000ಕ್ಕೂ ಹೆಚ್ಚು ಪ್ರದರ್ಶನಗಳೊಂದಿಗೆ ಅವರಿಗೆ **"ಸರಿಗಮ ವಿಜಿ"** ಎಂಬ ಹೆಸರನ್ನು ತಂದುಕೊಟ್ಟಿತು.

ಶ್ರೀಯುತರು 2400 ಕಂತುಗಳ ದೂರದರ್ಶನ ಧಾರವಾಹಿಗಳನ್ನು ನಿರ್ದೇಶಿಸಿದ್ದು, ಜೀ ಕನ್ನಡದಲ್ಲಿ ಪ್ರಸಾರವಾದ ರಿಯಾಲಿಟಿ ಶೋ, ಕಾಮಿಡಿ ಖಿಲಾಡಿಗಳು ಚಾಂಪಿಯನ್‌ಶಿಪ್‌ನಲ್ಲಿ ತೀರ್ಪುಗಾರರಾಗಿ ಭಾಗವಹಿಸಿದ್ದರು. ಶ್ರೀಯುತರ 38 ವರ್ಷಗಳ ಕಲಾ ಸೇವೆಯನ್ನು ಗುರುತಿಸಿ ರಾಜ್ಯ ಸರ್ಕಾರವು ರಾಜ್ಯೋತ್ಸವ ಪ್ರಶಸ್ತಿ ಮತ್ತು ತೆಲುಗು ವಿಜ್ಞಾನ ಸಮಿತಿಯು ಶ್ರೀಕೃಷ್ಣದೇವರಾಯ ಪುರಸ್ಕಾರ ನೀಡಿ ಗೌರವಿಸಿದೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಖ್ಯಾತ ನಟ, ನಿರ್ದೇಶಕ, ಸಂಭಾಷಣೆಕಾರರೊಬ್ಬರನ್ನು ಕಳೆದುಕೊಂಡಂತಾಗಿದೆ.**

## 6. ಸುಕ್ರಿ ಬೊಮ್ಮ ಗೌಡ

**ಪದ್ಮಶ್ರೀ ಪುರಸ್ಕೃತ ಕಾಡಿನ ಹಕ್ಕಿ, ಜಾನಪದ ಕೋಗಿಲೆ ಎಂದೇ ಪ್ರಸಿದ್ದರಾಗಿದ್ದ ಸುಕ್ರಿ ಬೊಮ್ಮಗೌಡ ಅವರು ದಿನಾಂಕ:13.02.2025ರಂದು ನಿಧನ ಹೊಂದಿರುತ್ತಾರೆ.**

1937ರಲ್ಲಿ ಜನಿಸಿದ್ದ ಶ್ರೀಯುತರು ಕರ್ನಾಟಕದ ಅಂಕೋಲಾದ ಹಾಲಕ್ಕಿ ಒಕ್ಕಲಿಗ ಬುಡಕಟ್ಟು ಜನಾಂಗಕ್ಕೆ ಸೇರಿದವರಾಗಿದ್ದು, ಬುಡಕಟ್ಟಿನ ಸಾಂಪ್ರದಾಯಿಕ ಹಾಡಿನ ಜೊತೆಗೆ ತಾರ್ಲೆ ಕುಣಿತ ತಂಡವನ್ನು ಕಟ್ಟಿ ತಮ್ಮ ಜನಾಂಗದವರಿಗೆ ಕಲಿಸಿ, ಸಂಗೀತವನ್ನು ಪ್ರದರ್ಶಿಸುತ್ತಿದ್ದರಲ್ಲದೇ ಬುಡಕಟ್ಟು ಜನಾಂಗದ ಸಂಸ್ಕೃತಿಯನ್ನು ಹಾಗೂ ಸಂಗೀತಗಳ ಭಂಡಾರವನ್ನು ಸಂರಕ್ಷಿಸಲು ಬಹಳಷ್ಟು ಶ್ರಮಿಸಿದ್ದರು. ಶ್ರೀಯುತರ ಪ್ರತಿಭೆ ಹಾಡಿಗಷ್ಟೆ ಸೀಮಿತವಾಗಿರದೆ ಪರಂಪರಾಗತ ನಾಟಿ ವೈದ್ಯ ಪದ್ಧತಿಯಲ್ಲೂ ಅಪಾರ ಜ್ಞಾನ ಹೊಂದಿದ್ದರು.

ದಶಕಗಳ ಕಾಲ ಸಾಕ್ಷರತಾ ಆಂದೋಲನಾ, ಸಾರಾಯಿ ನಿಷೇಧ, ರೈತ ಹೋರಾಟಗಳಂತಹ ಸಾಮಾಜಿಕ ಸಮಸ್ಯೆಗಳ ಕುರಿತು ತಮ್ಮ ತಂಡದ ಮೂಲಕ ಜನಜಾಗೃತಿ ಮೂಡಿಸಿದ್ದರು. ಕರ್ನಾಟಕದ ಬಡಗೇರಿಯ ಸ್ಥಳೀಯ ಸರ್ಕಾರಿ ಸಂಸ್ಥೆಯಾದ ಗ್ರಾಮ ಪಂಚಾಯತ್ ಸದಸ್ಯರಾಗಿ ಸೇವೆ ಸಲ್ಲಿಸಿದ್ದ ಶ್ರೀಯುತರು ಸುಮಾರು 5000 ಹಾಲಕ್ಕಿ ಪದಗಳನ್ನು ಕಂಠಪಾಠ ಮಾಡಿದ್ದ ಸುಕ್ರಾಜಿಯವರನ್ನು 'ಹಾಲಕ್ಕಿಯ ನೈಟಿಂಗೇಲ್' ಎಂದು ಕರೆಯಲಾಗಿದೆ. ತಮ್ಮ ಪಾರಂಪರಿಕ ಜ್ಞಾನದ ಮೂಲಕ

ಜಾನಪದ ಅಧ್ಯಯನ ನಡೆಸುವವರಿಗೆ ವಿಶ್ವಕೋಶವೇ ಆಗಿದ್ದರು. ಪರಂಪರೆಯಿಂದ ಹರಿದು ಬಂದ ರಾಮಾಯಣ, ಮಹಾಭಾರತ ಕಥೆಗಳನ್ನು ಹಾಡಬಲ್ಲವರಾಗಿದ್ದ ಶ್ರೀಯುತರು ಕರ್ನಾಟಕ ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಸುಗ್ಗಿ ಕುಣಿತ ಮತ್ತು ಗುಮಟೆ ಕಲೆಗಳ ತರಬೇತಿ ನೀಡುತ್ತಿದ್ದರು.

ಶ್ರೀಯುತರು ಕಲೆ ಮತ್ತು ಸಂಗೀತ ಕ್ಷೇತ್ರದಲ್ಲಿ ನೀಡಿದ್ದ ಅಪಾರ ಕೊಡುಗೆಗಳಿಗಾಗಿ ಜಾನಪದಶ್ರೀ ಪ್ರಶಸ್ತಿ, ನಾಡೋಜ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ ಹಾಗೂ ಸಾಂಪ್ರದಾಯಿಕ ಬುಡಕಟ್ಟು ಸಂಗೀತವನ್ನು ಸಂರಕ್ಷಿಸುವ ಕಾರ್ಯಕ್ಕಾಗಿ ಭಾರತದ ಅತ್ಯುನ್ನತ ನಾಗರೀಕ ಗೌರವವಾದ ಪದ್ಮಶ್ರೀ ಪ್ರಶಸ್ತಿ ಸೇರಿದಂತೆ ಇತರೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಶ್ರೇಷ್ಠ ಬುಡಕಟ್ಟು ಹಾಲಕ್ಕಿ ಜಾನಪದ ಗಾಯಕಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

<u>ಸಭಾನಾಯಕರು ಹಾಗೂ ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ</u>:-

ಮೃತರುಗಳ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರುಗಳ ಗೌರವಾರ್ಥ ಮಾನ್ಯ ಶಾಸಕರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

**ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.**

## ಕರ್ನಾಟಕ ವಿಧಾನ ಪರಿಷತ್ತು

## 155ನೇ ಅಧಿವೇಶನ

## ಸಂತಾಪ ಸೂಚನೆ

ಮಾನ್ಯ ಸಭಾಪತಿಯವರು:-

ವಿಧಾನ ಪರಿಷತ್ತಿನ ಮಾಜಿ ಸದಸ್ಯರು ಹಾಗೂ ಹಿರಿಯ ಪತ್ರಕರ್ತರಾದ ಖಾಜಿ ಅರಶದ್ ಅಲಿ ಅವರು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.

### ಖಾಜಿ ಅರಶದ್ ಅಲಿ

ವಿಧಾನ ಪರಿಷತ್ತಿನ ಮಾಜಿ ಸದಸ್ಯರು ಹಾಗೂ ಹಿರಿಯ ಪತ್ರಕರ್ತರಾದ ಖಾಜಿ ಅರಶದ್ ಅಲಿ ಅವರು ದಿನಾಂಕ:03.03.2025ರಂದು ನಿಧನ ಹೊಂದಿರುತ್ತಾರೆ.

1951ರ ಜೂನ್ 1 ರಂದು ಬೀದರ್ ಜಿಲ್ಲೆಯ ಬಾಲ್ಕಿಯಲ್ಲಿ ಜನಿಸಿದ್ದ ಶ್ರೀಯುತರು ಬಿ.ಎಸ್ಸಿ ಪದವೀಧರರಾಗಿದ್ದರು. ವೃತ್ತಿಯಲ್ಲಿ ಪತ್ರಕರ್ತರಾಗಿದ್ದ ಶ್ರೀಯುತರು **"ಬೀದರ್‌ಕೀ ಆವಾಜ್ ಹಿಂದಿ ಹಾಗೂ ಸುರ್ಖ ಝುಮೀನ್ ಉರ್ದು"** ದಿನಪತ್ರಿಕೆಗಳ ಸಂಪಾದಕರಾಗಿ ಕಾರ್ಯನಿರ್ವಹಿಸಿದ್ದರು. 2004 ರಿಂದ 2006, 2006 ರಿಂದ 2012ರ ಅವಧಿಗೆ ವಿಧಾನ ಸಭೆಯಿಂದ ವಿಧಾನ ಪರಿಷತ್ತಿಗೆ ಎರಡು ಬಾರಿ ಚುನಾಯಿತರಾಗಿ ಸೇವೆಯನ್ನು ಸಲ್ಲಿಸಿದ್ದ ಶ್ರೀಯುತರು ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ, ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷರಾಗಿಯೂ ಸೇವೆಯನ್ನು ಸಲ್ಲಿಸಿದ್ದರು. ಶ್ರೀಯುತರು ರಾಜ್ಯೋತ್ಸವ ಪ್ರಶಸ್ತಿ ಹಾಗೂ ಪ್ರೆಸ್ ಅಕಾಡೆಮಿ ಪ್ರಶಸ್ತಿಗಳಿಗೆ ಭಾಜನರಾಗಿದ್ದರು.

ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಪತ್ರಕರ್ತರು ಹಾಗೂ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ.

ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಮೌನ ಆಚರಿಸಿದ ನಂತರ)

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.

# ಕರ್ನಾಟಕ ವಿಧಾನ ಪರಿಷತ್ತು

## 155ನೇ ಅಧಿವೇಶನ

## ಸಂತಾಪ ಸೂಚನೆ

**ಮಾನ್ಯ ಸಭಾಪತಿಯವರು:–**

**ಪಿಇಎಸ್ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ, ಶಿಕ್ಷಣತಜ್ಞ ಹಾಗೂ ವಿಧಾನ ಪರಿಷತ್ತಿನ ಮಾಜಿ ಸದಸ್ಯರಾಗಿದ್ದ ಪ್ರೊ:ಎಂ.ಆರ್.ದೊರೆಸ್ವಾಮಿ ಅವರು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.**

## ಪ್ರೊ:ಎಂ.ಆರ್.ದೊರೆಸ್ವಾಮಿ

ಶಿಕ್ಷಣ ತಜ್ಞ ಹಾಗೂ **ವಿಧಾನ ಪರಿಷತ್ತಿನ ಮಾಜಿ ಸದಸ್ಯರಾಗಿದ್ದ ಮೇದರಪಟ್ಟ ರಾಮ ನಾಯ್ಡು ದೊರೆಸ್ವಾಮಿ ಅವರು ದಿನಾಂಕ:06.03.2025ರಂದು ನಿಧನ ಹೊಂದಿರುತ್ತಾರೆ.**

1937ರ ನವೆಂಬರ್ 7 ರಂದು ಆಂಧ್ರಪ್ರದೇಶದ ಚಿತ್ತೂರು ಜಿಲ್ಲೆಯ ನರ್ರಾವೂರು ಎಂಬ ಹಳ್ಳಿಯಲ್ಲಿ ಜನಿಸಿದ್ದ ಶ್ರೀಯುತರು ಮೂಲತ: ಕೃಷಿ ಕುಟುಂಬದವರಾಗಿದ್ದರು. ಎಂ.ಎ., ಬಿ.ಎಲ್., ಪದವೀಧರರಾಗಿದ್ದ ಶ್ರೀಯುತರು ಬೆಂಗಳೂರಿನ ದಯಾನಂದಸಾಗರ ಸಂಜೆ ಕಾಲೇಜಿನಲ್ಲಿ ಪ್ರಾಂಶುಪಾಲರಾಗಿ ತಮ್ಮ ವೃತ್ತಿ ಜೀವನ ಆರಂಭಿಸಿದ ಶ್ರೀಯುತರು ದೂರದೃಷ್ಟಿಯ ಚಿಂತನೆ ಹೊಂದಿದ್ದು, ಪಿಇಎಸ್ ಶಿಕ್ಷಣ ಸಂಸ್ಥೆಯನ್ನು ಶಾಲಾ ಹಂತದಿಂದ ವಿಶ್ವವಿದ್ಯಾಲಯದ ಮಟ್ಟಕ್ಕೆ ಕೊಂಡೊಯ್ಯುವಲ್ಲಿ ಯಶಸ್ವಿಯಾಗುವುದರ ಮೂಲಕ ಶಿಕ್ಷಣೋದ್ಯಮಿಯಾದರು. ಸರ್ಕಾರದ ಶೈಕ್ಷಣಿಕ ಸುಧಾರಣೆಗಳ ಸಲಹೆಗಾರರಾಗಿ ಎರಡು ಬಾರಿ ಕಾರ್ಯನಿರ್ವಹಿಸಿದ್ದ ಶ್ರೀಯುತರು ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಅಭಿವೃದ್ಧಿಪಡಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದರು.

2008 ರಿಂದ 2014ರವರೆಗೆ ವಿಧಾನ ಪರಿಷತ್ತಿಗೆ ನಾಮನಿರ್ದೇಶನ ಹೊಂದಿದ ಸದಸ್ಯರಾಗಿ ಸೇವೆ ಸಲ್ಲಿಸಿದ್ದ ಶ್ರೀಯುತರು ರಾಜ್ಯದ ಶೈಕ್ಷಣಿಕ ಅಭಿವೃದ್ಧಿಗೆ ಅನನ್ಯ ಕೊಡುಗೆ ನೀಡಿರುತ್ತಾರೆ. ಕೆಜಿಯಿಂದ ಪಿಜಿವರೆಗೆ ಎಲ್ಲಾ ರೀತಿಯ ಶಿಕ್ಷಣ ನೀಡಲು ಕರ್ನಾಟಕ ಮತ್ತು ಆಂಧ್ರಪ್ರದೇಶಗಳಲ್ಲಿ ಪಿಇಎಸ್ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿದ ಶ್ರೀಯುತರು ಜಾಗತಿಕ ಪ್ರವೃತ್ತಿಗಳ ಬಗ್ಗೆ ಅರಿವು ಮೂಡಿಸಿದ್ದರು. ಶಿಸ್ತು, ಸಂಯಮ, ಪರಿಶ್ರಮ ಮತ್ತು ದಣಿವರಿಯದ ಇವರ ದುಡಿಮೆಯಿಂದಾಗಿ ಶಿಕ್ಷಣ ಕ್ಷೇತ್ರದ ದೊರೆಯಾಗಿದ್ದರು.

--2

ಶ್ರೀಯುತರು ಶಿಕ್ಷಣ ಕ್ಷೇತ್ರದ ಸುಧಾರಣೆಗಾಗಿ ನೀಡಿರುವ ಅಪಾರ ಕೊಡುಗೆಗೆ ರಾಜ್ಯ ಸರ್ಕಾರವು ರಾಜ್ಯೋತ್ಸವ ಪ್ರಶಸ್ತಿ, ಕೆಂಪೇಗೌಡ ಪ್ರಶಸ್ತಿ, ಯುಎಸ್ ಶಿಕ್ಷಣ ಸಂಸ್ಥೆಯಿಂದ ಫುಲ್‌ಬ್ರೈಟ್ ಫೆಲೋಶಿಪ್ ಪ್ರಶಸ್ತಿ, ಆರ್ಯಭಟ ಪ್ರಶಸ್ತಿ ಹಾಗೂ ಮೈಸೂರು ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪ್ರಶಸ್ತಿಗಳಲ್ಲದೆ ಇತರೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಅತ್ಯುತ್ತಮ ಶಿಕ್ಷಣತಜ್ಞ ಹಾಗೂ ಹಿರಿಯ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

**ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:–**

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.

# ಕರ್ನಾಟಕ ವಿಧಾನ ಪರಿಷತ್ತು

## 155ನೇ ಅಧಿವೇಶನ

## ಸಂತಾಪ ಸೂಚನೆಗಳು

**ಮಾನ್ಯ ಸಭಾಪತಿಯವರು:-**

**ಮಾಜಿ ಸಚಿವರಾಗಿದ್ದ ಶ್ರೀ ಬಿ.ಸುಬ್ಬಯ್ಯ ಶೆಟ್ಟಿ ಹಾಗೂ ಭಾರತೀಯ ಶಿಕ್ಷಣ ತಜ್ಞೆ, ಮೈಸೂರು ಶಿಕ್ಷಣ ಸೊಸೈಟಿಯ ಸ್ಥಾಪಕ ಸದಸ್ಯರಾದ ವಿಮಲಾ ರಂಗಾಚಾರ್ ಅವರುಗಳು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.**

## 1. ಬಿ.ಸುಬ್ಬಯ್ಯ ಶೆಟ್ಟಿ

**ಮಾಜಿ ಸಚಿವರಾಗಿದ್ದ ಶ್ರೀ ಬಿ.ಸುಬ್ಬಯ್ಯ ಶೆಟ್ಟಿ ಅವರು ದಿನಾಂಕ:10.03.2025ರಂದು ನಿಧನ ಹೊಂದಿರುತ್ತಾರೆ.**

1934ರ ಏಪ್ರಿಲ್ 4ರಂದು ಮಂಗಳೂರಿನಲ್ಲಿ ಜನಿಸಿದ್ದ ಶ್ರೀಯುತರು ಬಿ.ಎಸ್ಸಿ., ಬಿ.ಎಲ್., ಪದವೀಧರರಾಗಿದ್ದು ವೃತ್ತಿಯಲ್ಲಿ ವಕೀಲರಾಗಿದ್ದರು. ಇವರು 1956 ರಿಂದ 1965ರವರೆಗೆ ಸಿ.ಬಿ.ಐ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದರಲ್ಲದೆ ಇಂಡೋ ಟಿಬೇಟಿಯನ್ ಗಡಿ ಪೋಲೀಸ್ ಪಡೆಯ ಸದಸ್ಯರಾಗಿದ್ದರು ಮತ್ತು ರಾಷ್ಟ್ರೀಯ ಏಕೀಕರಣ ವೇದಿಕೆಯ ಅಧ್ಯಕ್ಷರಾಗಿದ್ದ ಶ್ರೀಯುತರು ಸೂರತ್ಕಲ್ ವಿಧಾನಸಭೆ ಕ್ಷೇತ್ರದಿಂದ 5 ಮತ್ತು 6ನೇ ವಿಧಾನಸಭೆಗೆ ಚುನಾಯಿತರಾಗಿ ಸೇವೆಯನ್ನು ಸಲ್ಲಿಸಿರುತ್ತಾರೆ. ಶ್ರೀಯುತರು ಭೂ ಸುಧಾರಣಾ ಸಚಿವರಾಗಿ, ವಾರ್ತಾ ಮತ್ತು ಇಂಧನ ಹಾಗೂ ಶಿಕ್ಷಣ ಸಚಿವರಾಗಿ ಕಾರ್ಯನಿರ್ವಹಿಸಿರುತ್ತಾರೆ. ರಾಷ್ಟ್ರೀಯ ಸಮಗ್ರತಾ ದಳ ಅಧ್ಯಕ್ಷರಾಗಿ, ಜಿಲ್ಲಾ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿಯಾಗಿ, ದಕ್ಷಿಣ ಕನ್ನಡ ಜಿಲ್ಲೆಯ ಐ.ಎನ್.ಟಿ.ಯು.ಸಿ., ಯ ಅಧ್ಯಕ್ಷರಾಗಿಯು ಸೇವೆ ಸಲ್ಲಿಸಿದ್ದರು.

ಶ್ರೀಯುತರು ಡಿ.ದೇವರಾಜ ಅರಸ್ ಪ್ರಶಸ್ತಿ, ಶಾಂತವೇರಿ ಗೋಪಾಲಗೌಡ ಪ್ರಶಸ್ತಿ ಪುರಸ್ಕಾರಕ್ಕೆ ಭಾಜನರಾಗಿದ್ದರು.

ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ.

## 2. ವಿಮಲಾ ರಂಗಾಚಾರ್

**ಭಾರತೀಯ ಶಿಕ್ಷಣ ತಜ್ಞೆ ಹಾಗೂ ಮೈಸೂರು ಶಿಕ್ಷಣ ಸೊಸೈಟಿಯ ಸ್ಥಾಪಕ ಸದಸ್ಯರಾದ ವಿಮಲಾ ರಂಗಾಚಾರ್ ಅವರು ದಿನಾಂಕ: 25.02.2025ರಂದು ನಿಧನ ಹೊಂದಿರುತ್ತಾರೆ.**

1929ರಲ್ಲಿ ಬೆಂಗಳೂರಿನಲ್ಲಿ ಜನಿಸಿದ್ದ ಶ್ರೀಯುತರು ಇಂಗ್ಲೀಷ್ ಮತ್ತು ಮನೋವಿಜ್ಞಾನದಲ್ಲಿ ಪದವೀಧರರಾಗಿದ್ದರು. ಕರ್ನಾಟಕ ಕರಕುಶಲ ಮಂಡಳಿಯ ಅಧ್ಯಕ್ಷರಾಗಿ, ಮೈಸೂರು ಶಿಕ್ಷಣ ಸೊಸೈಟಿಯ ಸ್ಥಾಪಕ ಸದಸ್ಯರು ಹಾಗೂ ಅಧ್ಯಕ್ಷರಾಗಿ, ನಾಟ್ಯ ಕಥಕ್ ಮತ್ತು ನೃತ್ಯ ಸಂಯೋಜನೆ ಸಂಸ್ಥೆಯ ಅಧ್ಯಕ್ಷರಾಗಿ, ಕಾವೇರಿ ಕರಕುಶಲ ವಸ್ತುಗಳ ಎಂಪೋರಿಯಂನ ಅಧ್ಯಕ್ಷರಾಗಿ, ಮಹಿಳಾ ಸಬಲೀಕರಣದ ಪ್ರತಿಪಾದಕಿಯವರಾಗಿದ್ದ ಇವರು ಮಹಿಳಾ ಅಭಿವೃದ್ಧಿಯ ಮೇಲೆ ಕೇಂದ್ರೀಕರಿಸಿದ ಮಲ್ಲೇಶ್ವರಂನ (MEWS) ಮಹಿಳಾ ಸಮಾಜವನ್ನು ಸ್ಥಾಪಿಸಿದ್ದರು. ಶ್ರೀಯುತರು ಹತ್ತು ಹಲವಾರು ಸಂಘಸಂಸ್ಥೆಗಳ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಶ್ರೀಯುತರು ಸೇವಾ ಸದನ ಅನಾಥಾಶ್ರಮದ ಅಧ್ಯಕ್ಷೆ, ಎಡಿಎ ರಂಗಮಂದಿರದ ಗೌರವ ಕಾರ್ಯದರ್ಶಿ, ಗಾಂಧಿ ವಿಜ್ಞಾನ ಮತ್ತು ಮಾನವ ಮೌಲ್ಯಗಳ ಕೇಂದ್ರ-ಭಾರತೀಯ ವಿದ್ಯಾ ಭವನದ ಸಮಿತಿ ಸದಸ್ಯರಾಗಿ ಸೇವೆ ಸಲ್ಲಿಸಿದ್ದ ಶ್ರೀಯುತರು ಮಲ್ಲೇಶ್ವರಂನಲ್ಲಿ ಮೊದಲ ಮಹಿಳಾ ಹಾಸ್ಟೆಲ್ ಅನ್ನು ಸ್ಥಾಪಿಸಿದ ಕೀರ್ತಿಗೆ ಭಾಜನಾಗಿದ್ದರಲ್ಲದೆ, ಬೆಂಗಳೂರಿನ ಕಬ್ಬನ್ ಪಾರ್ಕ್‌ನಲ್ಲಿ ಜವಾಹರ ಬಾಲ ಭವನವನ್ನು ಮಕ್ಕಳ ರಂಗಭೂಮಿಗೆ ಮೀಸಲಾದ ಸ್ಥಳವಾಗಿ ಸ್ಥಾಪಿಸಲು ಕೊಡುಗೆ ನೀಡಿದ್ದರು.

ಬೆಂಗಳೂರು ಮೂಲದ ರಂಗಭೂಮಿ ತಂಡದ ನೇತೃತ್ವವಹಿಸಿ ರಂಗಭೂಮಿಯಲ್ಲೂ ತೊಡಗಿಸಿಕೊಂಡಿದ್ದ ಶ್ರೀಯುತರು ದೇಶದ ಸಾಂಸ್ಕೃತಿಕ ರಾಯಭಾರಿಯಾಗಿ ಯುನೈಟೆಡ್ ಸ್ಟೇಟ್ಸ್ ಮತ್ತು ಯುಎಸ್‌ಎಸ್‌ಆರ್ ದೇಶಗಳಿಗೆ ಪ್ರವಾಸ ಕೈಗೊಂಡಿದ್ದರು.

ಶ್ರೀಯುತರು ಶಿಕ್ಷಣ, ಕಲೆ ಮತ್ತು ಸಂಸ್ಕೃತಿಗೆ ನೀಡಿದ ಕೊಡುಗೆಗಾಗಿ ರಾಜ್ಯ ಸರ್ಕಾರದ ರಾಜ್ಯೋತ್ಸವ ಪ್ರಶಸ್ತಿ ಹಾಗೂ ಕಮಲ ಸನ್ಮಾನ್ ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಅತ್ಯುತ್ತಮ ಶಿಕ್ಷಣ ತಜ್ಞೆಯೊಬ್ಬರನ್ನು ಕಳೆದುಕೊಂಡಂತಾಗಿದೆ.**

**<u>ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-</u>**

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ. ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.